OS No. 151/2021 PW-**1**

**ದಿನಾಂಕ 29.03.2023 ರಂದು ಸಾಕ್ಷಿಯನ್ನು ಕರೆಯಿಸಿ, ಪ್ರಮಾಣ ವಚನ ಬೋಧಿಸಲಾಯಿತು.**

**ಮುಖ್ಯ ವಿಚಾರಣೆ ಃ ವಾದಿ ಪರ ವಕೀಲರಿಂದ ಃ**

ನಾನು ನನ್ನ ಮುಖ್ಯ ವಿಚಾರಣಾ ಬಾಬ್ತು ಪ್ರಮಾಣ ಪತ್ರವನ್ನು ಸಲ್ಲಿಸಿದ್ದು, ಅದರಲ್ಲಿ ಹೇಳಿದ ವಿಚಾರಗಳೆಲ್ಲವೂ ಸತ್ಯವಾಗಿದ್ದು, ಅವುಗಳನ್ನು ನಾನೇ ಹೇಳಿ ಬರೆಯಿಸಿರುತ್ತೇನೆ.

ನಾನು ನನ್ನ ಪರ ಸಾಕ್ಷಿಯಾಗಿ ಕೆಳಕಂಡ ದಾಖಲೆಗಳನ್ನು ಹಾಜರುಪಡಿಸಿದ್ದೇನೆ.

ದಿನಾಂಕ 31.08.2020 ರ ನೊಂದಾಯಿತ ಸ್ವಾದೀನ ರಹಿತ ಶುದ್ದ ಕ್ರಯದ ಕರಾರು ಪತ್ರವನ್ನು ಹಾಜರುಪಡಿಸಿದ್ದು ಅದನ್ನು ನಿಪಿ-1 ಎಂದು, ಸದರಿ ದಾಖಲೆಗೆ ನಾನು ಸಹಿಯನ್ನು ಮಾಡಿರುತ್ತೇನೆ. ಸಾಕ್ಷಿಯು ನಿಪಿ-1 ರಲ್ಲಿರುವ ತನ್ನ 6 ಸಹಿಗಳನ್ನು ನೋಡಿ ಗುರುತಿಸಿದ್ದು ಅವುಗಳನ್ನು ಒಟ್ಟಾರೆಯಾಗಿ ನಿಪಿ-1(ಎ) ಎಂದು, ಸಾಕ್ಷಿಯು ಸದರಿ ದಾಖಲೆಯಲ್ಲಿರುವ 3 ಜನರ ಪ್ರತಿವಾದಿಯವರ ಸಹಿಗಳನ್ನು ನೋಡಿ ಗುರುತಿಸುತ್ತಾರೆ ಅವುಗಳನ್ನು ಕ್ರಮವಾಗಿ ನಿಪಿ-1(ಬಿ), ನಿಪಿ-1(ಸಿ) ಮತ್ತು ನಿಪಿ-1(ಡಿ) ಎಂದು, ನಮೂನೆ 15 ಅನ್ನು ಹಾಜರುಪಡಿಸಿದ್ದು ಅದನ್ನು ನಿಪಿ-2 ಎಂದು, ಸರ್ವೆ ನಂಬರ್ 29/2 ರ ಆರ್ ಟಿ ಸಿ ಯನ್ನು ಹಾಜರುಪಡಿಸಿದ್ದು ಅದನ್ನು ನಿಪಿ-3 ಎಂದು, ದಿಃ15.09.2021 ರ ಲೀಗಲ್ ನೋಟೀಸ್ ನ ಕಛೇರಿಯ ಪ್ರತಿಯನ್ನು ಹಾಜರುಪಡಿಸಿದ್ದು ಅದನ್ನು ನಿಪಿ-4 ಎಂದು, 3 ಅಂಚೆ ರಶೀದಿಗಳನ್ನು ಹಾಜರುಪಡಿಸಿದ್ದು ಅವುಗಳನ್ನು ಒಟ್ಟಾರೆಯಾಗಿ ನಿಪಿ-5 ಎಂದು, ಸದರಿ ನೋಟೀಸ್ ಪ್ರತಿವಾದಿಯರಿಗೆ ಜಾರಿಯಾದ ಬಗ್ಗೆ Track consignment ಅನ್ನು ಹಾಜರುಪಡಿಸಿದ್ದು ಅದನ್ನು ನಿಪಿ-6 ಎಂದು, ಬೆಂಗಳೂರಿನ ವಕೀಲರಿಂದ ಪ್ರತಿವಾದಿಯವರಿಗೆ ದಿಃ06.02.2021 ರಂದು ಕಳುಹಿಸಿದ ನೋಟೀಸ್ ಅನ್ನು ಹಾಜರುಪಡಿಸಿದ್ದು ಅದನ್ನು ನಿಪಿ-7 ಎಂದು, ಸದರಿ ನೋಟೀಸ್ ಅನ್ನು ನೋಂದಾಯಿತ ಅಂಚೆ ಮುಖಾಂತರ ಕಳುಹಿಸಿದ್ದು ಆ ಬಗ್ಗೆ ಅಂಚೆ ರಶೀದಿಯನ್ನು ಹಾಜರುಪಡಿಸಿದ್ದು ಅದನ್ನು ನಿಪಿ-8 ಎಂದು ಗುರುತಿಸಲಾಯಿತು.

**<u>ಪಾಟೀ ಸವಾಲು ಃ ಪ್ರತಿವಾದಿ ಪರ ವಕೀಲರಿಂದ ಃ</u>**

ಪ್ರತಿವಾದಿ ಪರ ವಕೀಲರು ಗೈರು ಹಾಜರಾಗಿದ್ದು ಪಾಟೀ ಸವಾಲನ್ನು ಮುಂದೂಡಲಾಯಿತು.

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನವನ್ನು ಗಣಕೀಕರಣ ಮಾಡಲಾಯಿತು)**Na**

ಓ.ಹೇ.ಕೇ.ಸ.ಒ

ಹಿರಿಯ ಸಿವಿಲ್ ನ್ಯಾಯಾಧೀಶರು

ಮತ್ತು ಜೆ.ಎಂ.ಎಫ್.ಸಿ.,ಚನ್ನಪಟ್ಟಣ.